ಬೆಂಗಳೂರು ನಗರ ವಿಶ್ವವಿದ್ಯಾನಿಲಯ BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ|| ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 22131385 E-Mail ID: registrarbcu@gmail.com

ಸಂಖ್ಯೆ:ಬೆಂ.ನ.ವಿ/ಕುಸಆ/ಕೋವಿಡ್–19/ 2021–22 ದಿನಾಂಕ: 05–01–2022

## ಸುತ್ತೋಲೆ

ವಿಷಯ: ಕೋವಿಡ್–19 ಸಾಂಕ್ರಾಮಿಕ ರೋಗದ ನಿಮಿತ್ತ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಎಲ್ಲಾ ಸರ್ಕಾರಿ, ಸಂಯೋಜಿತ/ಸ್ವಾಯತ್ತ ಕಾಲೇಜುಗಳನ್ನು ದಿನಾಂಕ: 06.01.2022 ರಿಂದ 19.01.2022 ರವರೆಗೆ 14 ದಿನಗಳು ಕಾಲೇಜಿಗೆ ರಜೆಯನ್ನು ನೀಡುವ ಕುರಿತು.

ಉಲ್ಲೇಖ
1. ಸರ್ಕಾರದ ಮಾರ್ಗಸೂಚಿ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ: 04–01–2022.
2. ಕಾಲೇಜು ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/107/ಕೋ.ಮಾ.ಸೂ/ 2020–21 ದಿನಾಂಕ: 05–01–2022.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 05.01.2022.

*****

ಓಮಿಕ್ರಾನ್ ವೈರಸ್/ಕೋವಿಡ್–19 ರ ಸಾಂಕ್ರಾಮಿಕ ರೋಗವು ಹೆಚ್ಚುತ್ತಿರುವ ಕಾರಣದಿಂದಾಗಿ, ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಸದರಿ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ಸರ್ಕಾರದ ಉಲ್ಲೇಖ (1) ಹಾಗೂ ಉಲ್ಲೇಖ (2)ರ ಆದೇಶಾನುಸಾರ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ವಿಶ್ವವಿದ್ಯಾನಿಲಯದ ಬಹುಶೀಸ್ತಿಯ ಘಟಕ ಮಹಿಳಾ ಕಾಲೇಜು, ಮಲ್ಲೇಶ್ವರಂ ಹಾಗೂ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಗೆ ಒಳಪಡುವ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸರ್ಕಾರಿ, ಸಂಯೋಜಿತ/ಸ್ವಾಯತ್ತ ಕಾಲೇಜುಗಳಲ್ಲಿ ದಿನಾಂಕ: 06.01.2022 ರಿಂದ 19.01.2022 ರವರೆಗೆ 14 ದಿನಗಳು ಕಾಲೇಜಿಗೆ ರಜೆಯನ್ನು ನೀಡಲಾಗಿದೆ ಮತ್ತು ಭೌತಿಕ ತರಗತಿಗಳನ್ನು ನಡೆಸುವುದನ್ನು ರದ್ದುಪಡಿಸಲಾಗಿದೆ.

ಸದರಿ ಅವಧಿಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಅಧ್ಯಾಪಕರುಗಳು ಕೋವಿಡ್ ಮಾರ್ಗಸೂಚಿಯನ್ನು ಅನುಸರಿಸಿ, ವಿಭಾಗಗಳಿಗೆ ಹಾಜರಾಗಿ ವಿಭಾಗ/ಘಟಕ ಕಾಲೇಜುಗಳಿಂದಲೇ ವಿದ್ಯಾರ್ಥಿಗಳಿಗೆ ಆನ್–ಲೈನ್ ಮುಖಾಂತರ ಬೋಧನಾ ಕಾರ್ಯ ಹಾಗೂ ಇತರೆ ಕೆಲಸಗಳನ್ನು ನಿರ್ವಹಿಸುವಂತೆ ಸೂಚಿಸಲಾಗಿದೆ.

ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿನ ಸರ್ಕಾರಿ, ಸಂಯೋಜಿತ/ಸ್ವಾಯತ್ತ ಕಾಲೇಜುಗಳ ಶಿಕ್ಷಕರು ಎಂದಿನಂತೆ ಕರ್ತವ್ಯಕ್ಕೆ ಹಾಜರಾಗಿ ಆನ್–ಲೈನ್ ಮುಖಾಂತರ ವಿದ್ಯಾರ್ಥಿಗಳಿಗೆ ಬೋಧನಾ ಕಾರ್ಯನಿರ್ವಹಿಸಲು ತಿಳಿಸಲು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಉಳಿದಂತೆ, ವಿಶ್ವವಿದ್ಯಾನಿಲಯದ ಎಲ್ಲಾ ಕಛೇರಿ/ ವಿಭಾಗಗಳು ಎಂದಿನಂತೆ ಕಾರ್ಯನಿರ್ವಹಿಸುತ್ತವೆ ಹಾಗೂ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿದ್ದು, ಕೋವಿಡ್–19 ಮಾರ್ಗಸೂಚಿಯನ್ನು ಅನುಸರಿಸಿ ಕಛೇರಿ ಕೆಲಸವನ್ನು ನಿರ್ವಹಿಸಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ಕುಲಸಚಿವರು

ಗೆ,
1. ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿಗಳಿಗೆ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು.
2. ಪ್ರಭಾರ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಬಹುಶೀಸ್ತಿಯ ಘಟಕ ಮಹಿಳಾ ಕಾಲೇಜು, ಮಲ್ಲೇಶ್ವರಂ.
3. ಸರ್ಕಾರಿ, ಸಂಯೋಜಿತ/ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಗಳು:
1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಬಹುಮಹಡಿಗಳ ಕಟ್ಟಡ, ಬೆಂಗಳೂರು–560001– ಮಾಹಿತಿಗಾಗಿ.
2) ಕುಲಪತಿಗಳ/ ಕುಲಸಚಿವರು(ಮೌ)/ವಿತ್ತಾಧಿಕಾರಿಗಳ ಆಪ್ತ ಕಾರ್ಯದರ್ಶಿಗಳು, ಬೆಂ.ನ.ವಿ. ಬೆಂಗಳೂರು.
3) ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸಲು.